# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಕೋಲಾರ ಜಿಲ್ಲೆ, ಬಂಗಾರಪೇಟೆ ತಾಲ್ಲೂಕಿನ ರಾಮಸಾಗರ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀಮತಿ ಕೆ.ಪಿ.ಸಾಮಕ್ಕ (ಮಾಜಿ ಅಧ್ಯಕ್ಷರು) ರವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/333/ಗ್ರಾಪಂಅ/2019, ದಿನಾಂಕ: 31/07/2019
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1135/ಗ್ರಾಪಂಅ/2018, ದಿನಾಂಕ: 02/02/2019.
3) ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರ ಕಾರಣ ಕೇಳುವ ನೋಟೀಸ್ ದಿನಾಂಕ: 06/11/2019
4) ಕೋಲಾರ ಜಿಲ್ಲೆ, ಬಂಗಾರಪೇಟೆ ತಾಲ್ಲೂಕಿನ ರಾಮಸಾಗರ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀಮತಿ ಕೆ.ಪಿ.ಸಾಮಕ್ಕ ರವರು ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 13/12/2019.
5) ವಿಚಾರಣಾಧಿಕಾರಿಗಳ ವಿಚಾರಣಾ ವರದಿ ದಿನಾಂಕ: 21/01/2020.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಪತ್ರದಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 12(1) ಮತ್ತು 12(3) ರನ್ವಯ ಮಾನ್ಯ ಲೋಕಾಯುಕ್ತ ರವರು ಸಲ್ಲಿಸಿರುವ ವರದಿರನ್ವಯ ಕೋಲಾರ ಜಿಲ್ಲೆ, ಬಂಗಾರಪೇಟೆ ತಾಲ್ಲೂಕಿನ ರಾಮಸಾಗರ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀಮತಿ ಕೆ.ಪಿ.ಸಾಮಕ್ಕ (ಮಾಜಿ ಅಧ್ಯಕ್ಷರು) ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ನಿಯಮಾನುಸಾರ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ರವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಕಲಂ 43(ಎ)ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5)ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಮೇಲೆ ದಾಖಲಾಗುವ ದೂರುಗಳಿಗೆ ಸಂಬಂಧಿಸಿದಂತೆ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಸಂಬಂಧಿಸಿದ ಕಂದಾಯ ವಿಭಾಗಗಳ ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ವಿಚಾರಣಾಧಿಕಾರಿಗಳು ರಾಮಸಾಗರ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀಮತಿ ಕೆ.ಪಿ.ಸಾಮಕ್ಕ ರವರಿಗೆ ದೂರಿನ ಸಂಬಂಧ ವಿಚಾರಣ ದಿನಾಂಕದಂದು ಸಂಬಂಧಪಟ್ಟ ಎಲ್ಲಾ ಸಮರ್ಥನೀಯ ಅಗತ್ಯ ದಾಖಲೆಗಳೊಂದಿಗೆ ವಿಚಾರಣೆಗೆ ಹಾಜರಾಗಿ, ತಮ್ಮ ತಮ್ಮ ಲಿಖಿತ ಹೇಳಿಕೆಗಳನ್ನು ಸಲ್ಲಿಸುವಂತೆ ದಿನಾಂಕ: 06.11.2019 ರಂದು ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ, ದಿನಾಂಕ: 06.11.2019 ರಂದು ಜಾರಿಗೊಳಿಸಿದ್ದ ಕಾರಣ ಕೇಳುವ ನೋಟೀಸ್‌ಗೆ ಶ್ರೀಮತಿ ಕೆ.ಪಿ.ಸಾಮಕ್ಕ ರವರು ದಿನಾಂಕ: 13.12.2019 ರಂದು ಈ ಕೆಳಕಂಡಂತೆ ಲಿಖಿತ ಹೇಳಿಕೆಗಳನ್ನು ಸಲ್ಲಿಸಿರುತ್ತಾರೆ:-

ಶ್ರೀಮತಿ ಕೆ.ಪಿ.ಸಾಮಕ್ಕ, ಆದ ನಾನು ಕೆ.ಜಿ.ಎಫ್ ಹೊಸ ಕಂದಾಯ ತಾಲ್ಲೂಕಿನ ರಾಮಸಾಗರ ಗ್ರಾಮ ಪಂಚಾಯಿತಿಯ ಕೂಳೂರು ಗ್ರಾಮದ ನಿವಾಸಿಯಾಗಿದ್ದು ರಾಮಸಾಗರ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷೆಯಾಗಿರುತ್ತೇನೆ. ನಾನು ನಿವೃತ್ತ ಅಂಗನವಾಡಿ ಶಿಕ್ಷಕಿಯಾಗಿದ್ದು ನಿವೃತ್ತಿಯ ನಂತರ ಸ್ಥಳೀಯರು ಹಾಗೂ ಗ್ರಾಮಸ್ಥರ ಒತ್ತಾಯದ ಮೇರೆಗೆ 2015 ರಲ್ಲಿ ನಡೆದ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ನಮ್ಮ ಪಕ್ಕದ

ಗ್ರಾಮವಾದ ನೆರ್ನಹಳ್ಳಿ ಗ್ರಾಮದಲ್ಲಿ ನನ್ನ ವಿರುದ್ಧ ದೂರು ನೀಡಿರುವ ಕೃಷ್ಣಾರೆಡ್ಡಿರವರ ಧರ್ಮಪತ್ನಿಯ ವಿರುದ್ಧ ಚುನಾವಣೆಗೆ ನಿಂತು ಒಂದು ಮತದ ಅಂತರದಲ್ಲಿ ಗೆದ್ದು ಗ್ರಾಮ ಪಂಚಾಯಿತಿ ಅಧ್ಯಕ್ಷೆಯಾಗಿದ್ದೆ. ದೂರುದಾರರಾದ ಶ್ರೀ ಕೃಷ್ಣಾರೆಡ್ಡಿರವರ ಪತ್ನಿ ನನ್ನ ವಿರುದ್ಧ ಒಂದು ಮತದ ಅಂತರದಲ್ಲಿ ಸೋತಿದ್ದರಿಂದ ಹತಾಶೆಗೊಂಡು ನನ್ನ ಮೇಲೆ ಕೆ.ಜಿ.ಎಫ್ ಕೋರ್ಟ್‌ನಲ್ಲಿ ಕೇಸು ಹಾಕಿರುತ್ತಾರೆ. ಆ ಕೇಸು ನಡೆಯುತ್ತಿದೆ ಹಾಗೂ ನನ್ನ ಮಗ ರವಿಚಂದ್ರನಾಯ್ಡುರವರ ವಿರುದ್ಧವೂ ಲೋಕಾಯುಕ್ತದಲ್ಲಿ ಸುಳ್ಳು ದೂರನ್ನು ನೀಡಿದ್ದು, ಅದು ಸಹ ವಿಚಾರಣೆ ನಡೆಯುತ್ತಿದೆ. ನನ್ನ ಕುಟುಂಬ ಹಾಗೂ ನನ್ನ ಸಂಬಂಧಿಕರು ಮೂಲತ: ರಾಜಕೀಯವಾಗಿ ತೊಡಗಿಸಿಕೊಂಡಿರುತ್ತಾರೆ. ನಮ್ಮ ಕುಟುಂಬಕ್ಕೆ ಸ್ಥಳೀಯ ಶಾಸಕರು ಜಿಲ್ಲಾ ಪಂಚಾಯಿತಿ ಸದಸ್ಯರು ಮುಂತಾದ ರಾಜಕೀಯ ವ್ಯಕ್ತಿಗಳು ಒಳ್ಳೆ ಸ್ನೇಹ ಸಂಬಂಧದಿಂದ ಇದ್ದಾರೆ. ಅವರ ಒಂದು ಪ್ರೋತ್ಸಾಹದಿಂದ ನಾನು ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಭಾಗವಹಿಸಿದ್ದೆ. ಶ್ರೀ ಕೃಷ್ಣಾರೆಡ್ಡಿಯವರು ರಾಜಕೀಯ ದುರುದ್ದೇಶದಿಂದ ನನ್ನ ಹಾಗೂ ನನ್ನ ಕುಟುಂಬದವರ ವಿರುದ್ಧ ಸುಳ್ಳು ದೂರುಗಳನ್ನು ನೀಡುತ್ತಾ ಬಂದಿರುತ್ತಾರೆ. ಅವರು ಹೇಳಿದ ಹಾಗೆ ನಾನು ಯಾವುದೇ ಅಧಿಕಾರ ದುರಪಯೋಗ, ಅಕ್ರಮ ಸಂಪಾದನೆ ಹಾಗೂ ಹಣ ದುರುಪಯೋಗ ಮಾಡಿರುವುದಿಲ್ಲ. ಕಾಲ ಕಾಲಕ್ಕೆ ನಮ್ಮ ಪಂಚಾಯಿತಿಯಲ್ಲಿ ಆಡಿಟ್ ನಡೆಯುತ್ತಾ ಬಂದಿದ್ದು ಯಾವುದೇ ರೀತಿಯ ಅವ್ಯವಹಾರ ಕಂಡು ಬಂದಿಲ್ಲ. ಹಾಗಾಗಿ ತಾವು ಶ್ರೀ ಕೃಷ್ಣಾರೆಡ್ಡಿಯವರು ನನ್ನ ವಿರುದ್ಧ ನೀಡಿರುವ ಸುಳ್ಳು ದೂರನ್ನು ವಜಾಗೊಳಿಸಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ವಿಚಾರಣಾಧಿಕಾರಿಗಳು ಶ್ರೀಮತಿ ಕೆ.ಪಿ.ಸಾಮಕ್ಕ, ಸದಸ್ಯರು, ರಾಮಸಾಗರ ಗ್ರಾಮ ಪಂಚಾಯಿತಿ, ಬಂಗಾರಪೇಟೆ ತಾಲ್ಲೂಕು, ಕೋಲಾರ ಜಿಲ್ಲೆ ರವರ ವಿರುದ್ಧ ಇರುವ ದೂರಿನ ಬಗ್ಗೆ ದಿನಾಂಕ: 06.11.2019 ರಂದು ಕಾರಣ ಕೇಳಿ ನೋಟೀಸ್ ನೀಡಿ ಲಿಖಿತ ವಿವರಣೆ ನೀಡುವಂತೆ ತಿಳಿಸಲಾಗಿರುತ್ತದೆ. ಈ ಸಂಬಂಧ ದಿನಾಂಕ: 13.12.2019 ರಂದು ಲಿಖಿತ ಹೇಳಿಕೆ ನೀಡಿರುತ್ತಾರೆ. ಈ ವಿಚಾರದ ಬಗ್ಗೆ ದಿನಾಂಕ: 06.12.2019 ಮತ್ತು ದಿನಾಂಕ: 13.12.2019 ರಂದು ವಿಚಾರಣೆ ನಡೆಸಲಾಗಿರುತ್ತದೆ. ರಾಮಸಾಗರ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀಮತಿ ಕೆ.ಪಿ.ಸಾಮಕ್ಕ ರವರ ವಿರುದ್ಧ ಇರುವ ದೂರಿನ ಪ್ರಕರಣವು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(2) ಮತ್ತು 12(4) ರನ್ವಯ ದೂರು ದಾಖಲಾಗಿದ್ದು ಇವರು ಅಕ್ರಮ ಆಸ್ತಿಹೊಂದಿರುವ ಬಗ್ಗೆ ಹಾಗೂ ಇವರ ಮಗ ಕೆ.ಎಂ.ರವಿಚಂದ್ರನಾಯ್ಕ ರವರು ಶಿಕ್ಷಣ ಇಲಾಖೆಯಲ್ಲಿ ಸಹ ಶಿಕ್ಷಕರಾಗಿದ್ದು ಇವರ ಹೆಸರಿನಲ್ಲಿ ಚರ, ಸ್ಥಿರ ಆಸ್ತಿ ಇದ್ದು ವಾರ್ಷಿಕ ಆಸ್ತಿ ದಾಯಿತ್ವ ಪಟ್ಟಿಗಳನ್ನು ಸಲ್ಲಿಸಿಕೊಳ್ಳದೆ ಇರುವುದರಿಂದ ಶ್ರೀಮತಿ ಕೆ.ಪಿ.ಸಾಮಕ್ಕರವರು ಅಕ್ರಮ ಆಸ್ತಿ ಹೊಂದಿರುವುದು ಮಾನ್ಯ ಲೋಕಾಯುಕ್ತರವರ ತನಿಖಾ ವರದಿಯಿಂದ ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಹಾಗೂ ದಿನಾಂಕ:13.12.2019 ರಂದು ನಡೆದ ವಿಚಾರಣಾ ವೇಳೆಯಲ್ಲಿ ಶ್ರೀಮತಿ ಕೆ.ಪಿ.ಸಾಮಕ್ಕ ರವರು ನೀಡಿರುವ ಲಿಖಿತ ಹೇಳಿಕೆಗೂ ಇವರ ವಿರುದ್ಧ ಇರುವ ದೂರಿಗೂ ಸಮಂಜಸವಾದ ಹೇಳಿಕೆ ನೀಡಿರುವುದಿಲ್ಲ.

ಶ್ರೀಮತಿ ಕೆ.ಪಿ.ಸಾಮಕ್ಕರವರ ಲಿಖಿತ ಹೇಳಿಕೆ ಹಾಗೂ ಮಾನ್ಯ ಲೋಕಾಯುಕ್ತರವರು ತನಿಖಾ ವರದಿಯನ್ನು ಪರಿಶೀಲಿಸಿದಾಗ ಶ್ರೀಮತಿ ಕೆ.ಪಿ.ಸಾಮಕ್ಕರವರು ಅಕ್ರಮ ಆಸ್ತಿ ಹೊಂದಿರುವುದು ದೃಡಪಟ್ಟಿದ್ದು ಇವರ ವಿರುದ್ಧ ಕ.ಪಂ.ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4), 48(5) ರನ್ವಯ ಇವರ ವಿರುದ್ಧ ಕ್ರಮ ಜರುಗಿಸಬಹುದಾಗಿರುತ್ತದೆಂದು ಎಂದು ತಿಳಿಸುತ್ತಾ, ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳು, ವಿಚಾರಣಾಧಿಕಾರಿಗಳು ಸಲ್ಲಿಸಿರುವ ವಿಚಾರಣಾ ವರದಿಯಲ್ಲಿನ ಅಂಶಗಳು ಹಾಗೂ ಶ್ರೀಮತಿ ಕಿ.ಪಿ.ಸಾಮಕ್ಕ, ರಾಮಸಾಗರ ಗ್ರಾಮ ಪಂಚಾಯಿತಿ ಸದಸ್ಯರು ನೀಡಿರುವ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿದಾಗ ಶ್ರೀಮತಿ ಕೆ.ಪಿ.ಸಾಮಕ್ಕ ರವರು ಅಕ್ರಮ ಆಸ್ತಿ ಹೊಂದಿರುವುದು ವಿಚಾರಣಾಧಿಕಾರಿಗಳ ವರದಿಯಿಂದ ಸ್ಪಷ್ಟವಾಗಿ ಕಂಡುಬಂದಿರುವುದರಿಂದ ರಾಮಸಾಗರ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀಮತಿ ಸಾಮಕ್ಕ ರವರನ್ನು ಗ್ರಾಮ ಪಂಚಾಯಿತಿಯ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಹಿಸಿ,

ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/333/ಗ್ರಾಪಂಕಾ/2019.**
**ಬೆಂಗಳೂರು, ದಿನಾಂಕ: 03ನೇ ಮಾರ್ಚ್ 2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕೋಲಾರ ಜಿಲ್ಲೆ, ಬಂಗಾರಪೇಟೆ ತಾಲ್ಲೂಕಿನ ರಾಮಸಾಗರ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀ ಕೆ.ಪಿ.ಸಾಮಕ್ಕ (ಮಾಜಿ ಅಧ್ಯಕ್ಷರು) ರವರು ಅಕ್ರಮ ಆಸ್ತಿ ಹೊಂದಿರುವುದು ರುಜುವಾತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ರನ್ವಯ ಗ್ರಾಮ ಪಂಚಾಯಿತಿಯ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಿ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ನವೀನ್ ಕುಮಾರ್.ಬಿ)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ, ಬಂಗಾರಪೇಟೆ ತಾಲ್ಲೂಕು ಪಂಚಾಯಿತಿ, ಕೋಲಾರ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರಾಮಸಾಗರ ಗ್ರಾಮ ಪಂಚಾಯಿತಿ, ಬಂಗಾರಪೇಟೆ ತಾಲ್ಲೂಕು, ಕೋಲಾರ ಜಿಲ್ಲೆ.
5. ಶ್ರೀಮತಿ ಕೆ.ಪಿ.ಸಾಮಕ್ಕ, ರಾಮಸಾಗರ ಗ್ರಾಮ ಪಂಚಾಯಿತಿ, ಬಂಗಾರಪೇಟೆ ತಾಲ್ಲೂಕು, ಕೋಲಾರ ಜಿಲ್ಲೆ. **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬಂಗಾರಪೇಟೆ, ಕೋಲಾರ ಜಿಲ್ಲೆ ಇವರ ಮುಖಾಂತರ)**
6. ಸರ್ಕಾರದ ಅಧೀನ ಕಾರ್ಯದರ್ಶಿ, (ಪ್ರಾಥಮಿಕ ಶಿಕ್ಷಣ) ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು,
7. ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್–1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.

****